ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

## ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ವಿಜಯನಗರ

ಪಿನ್: (583201) ದೂರವಾಣಿ ಸಂಖ್ಯೆ: 9449842083

ಸಂ:ಎನ್.ಹೆಚ್.ಎಂ/ಎನ್.ಟಿ.ಇ.ಪಿ./152/2025-26 ದಿನಾಂಕ: 16.12.2025

-: ಗುತ್ತಿಗೆ ನೇಮಕಾತಿ ಅಧಿಸೂಚನೆ :-

ರಾಷ್ಟ್ರೀಯ ಆರೋಗ್ಯ ಅಭಿಯಾನ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ವಿಜಯನಗರ ಜಿಲ್ಲೆಗೆ ಮಂಜೂರಾಗಿರುವ ಒಂದು Accountant ಹುದ್ದೆಗೆ ಪ್ರತೀ ಆರ್ಥಿಕ ವರ್ಷಗಳಲ್ಲಿ ನವೀಕರಣದ ಷರತ್ತುಗಳನ್ನೊಳಗೊಂಡಂತೆ ಎನ್.ಹೆಚ್.ಎಂ ನಿಯಮಾವಳಿಗಳ ಪ್ರಕಾರ ಮೇರಿಟ್ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಸದರಿ ನೇರ ಗುತ್ತಿಗೆ ನೇಮಕಾತಿಯು ತಾತ್ಕಾಲಿಕವಾಗಿದ್ದು, ದಿನಾಂಕ: 31.03.2026 ಅಥವಾ ಮುಂದಿನ ಆದೇಶದವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಸೀಮಿತವಾಗಿರುತ್ತದೆ. ಸದರಿ ಹುದ್ದೆಯನ್ನು ಮುಂದುವರೆಸಬೇಕಾದ್ದಲ್ಲಿ ಕಾರ್ಯಕ್ಷಮತೆಯನ್ನು ಪರಿಕ್ಷೀಸಿ, 01.04.2026 ರಂದು ಕರ್ತವ್ಯದಿಂದ ಬಿಡುಗಡೆಗೊಳಿಸಿ, 02.04.2026 ರಿಂದ 2026-27 ನೇ ಸಾಲಿಗೆ ಮುಂದುವರೆಸಲಾಗುವುದು.

**ಖಾಲಿ ಇರುವ ಹುದ್ದೆಯ ವಿವರ:**

| ಕ್ರ ಸಂ | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ಷರಾ |
|---|---|---|---|
| 1 | Accountant | 01 ಹುದ್ದೆ (ಕಲ್ಯಾಣ ಕರ್ನಾಟಕ ಅಭ್ಯರ್ಥಿ) | ಒಂದೇ ಹುದ್ದೆ ಆಗಿರುವುದರಿಂದ ಮೀಸಲಾತಿ ಅನ್ವಯಿಸುವುದಿಲ್ಲ. |

**ನೇಮಕಾತಿಗೆ ಸಂಬಂಧಿಸಿದ ವಿದ್ಯಾರ್ಹತೆ/ಅನುಭವದ ವಿವರ :**

**Essential Qualification**

1. Graduate in Commerce

**Preferential Qualification**

1. MBA/PGD in Financial management
2. Familiarity with audit in a recognized society or institution

**Experience :**

1. Two years of experience in Maintenance of accounts double entry system in a recognized Society or Institution
2. Experience in working with accounting software for at least 2 years.

**Salary Per Month :** Rs. 14,698/-

**ಸಾಮಾನ್ಯ ಸೂಚನೆಗಳು**

- ಒಂದೇ ಹುದ್ದೆಯಾಗಿರುವುದರಿಂದ ಮೀಸಲಾತಿ ಅನ್ವಯಿಸುವುದಿಲ್ಲ.
- ಎನ್.ಹೆಚ್.ಎಂ ಯೋಜನೆಯಡಿಯಲ್ಲಿ ಖಾಲಿ ಇರುವ ಸದರಿ ಹುದ್ದೆಯ ನೇಮಕಾತಿಗೆ ಸಲ್ಲಿಸುವ ಅರ್ಜಿಯ ಜೊತೆಗೆ ಸದರಿ ನೇಮಕಾತಿ ಪ್ರಕ್ರಿಯೆಗೆ ಸಂಬಂಧಪಟ್ಟ ಪೂರ್ಣ ವಿವರವನ್ನು ದಾಖಲಾತಿಗಳನ್ನು www.vijayanagara.nic.in ಈ ಜಾಲತಾಣದಲ್ಲಿರುವಂತೆ ಅಭ್ಯರ್ಥಿಗಳು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಮಾತ್ರ ಅರ್ಜಿ ಸಲ್ಲಿಸಿದ ನಂತರ ಹೆಚ್ಚುವರಿ ದಾಖಲಾತಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.
- ಅಭ್ಯರ್ಥಿಗಳು ಭಾರತೀಯ ನಾಗರೀಕರಾಗಿರತಕ್ಕದ್ದು.
- ಅಭ್ಯರ್ಥಿಗಳು ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಕಾಣುವಂತೆ ಆನ್‌ಲೈನ್ ಮೂಲಕ ಅಪಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳಲ್ಲಿ ಅಪೂರ್ಣ ಹಾಗೂ ಅಸ್ಪಷ್ಟ ದಾಖಲೆಗಳನ್ನು ಅಥವಾ ಮಾಹಿತಿಗಳನ್ನು ನೀಡಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(P.T.O)

- ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭದ ದಿನಾಂಕ: **17.12.2025** ರಿಂದ **24.12.2025** ರ ಸಂಜೆ 05:30 ಗಂಟೆಯೊಳಗಾಗಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸತಕ್ಕದ್ದು.
- ನೇಮಕಾತಿ ಪ್ರಕಟಣೆಯಲ್ಲಿ ಹುದ್ದೆಯ ಮುಂದೆ ಸೂಚಿಸಿರುವ, ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು. ವಿದ್ಯಾರ್ಹತೆಯನ್ನು ಹೊರತುಪಡಿಸಿ ಇತರೆ ಯಾವುದೇ ಸಮಾನಾಂತರ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.
- ಕನ್ನಡ ಓದುವುದು, ಬರೆಯುವುದು, ಮಾತನಾಡುವುದು (ಕನ್ನಡ ಭಾಷಾ ಜ್ಞಾನ ಕಡ್ಡಾಯವಾಗಿರುತ್ತದೆ).
- ಅರ್ಜಿಯಲ್ಲಿ ನಮೂದಿಸಿದ ಅಂಕಪಟ್ಟಿ/ಇತರೆ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
- ಈ ನೇಮಕಾತಿ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೇ, ಯಾವುದೇ ಹಂತದಲ್ಲಿ ಹಿಂದಕ್ಕೆ ಪಡೆಯುವ, ರದ್ದುಪಡಿಸುವ ಅಧಿಕಾರವನ್ನು ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣ ಸಂಘ, ವಿಜಯನಗರ ಹೊಂದಿರುತ್ತದೆ. ಅಭ್ಯರ್ಥಿಗಳು ಆಯ್ಕೆಯಾದ ನಂತರ, ಸಲ್ಲಿಸಿರುವ ದಾಖಲಾತಿಗಳ ನೈಜತೆಯನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ/ವಿಶ್ವವಿದ್ಯಾಲಯಗಳಿಂದ ದೃಢೀಕರಿಸಿಕೊಳ್ಳುವ ಹಕ್ಕನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ಕಾಯ್ದಿರಿಸಿಕೊಂಡಿದೆ.
- ಸದರಿ ಹುದ್ದೆಗೆ ಅಗತ್ಯವಿರುವ ವಿದ್ಯಾರ್ಹತೆ/ಅನುಭವವನ್ನು ಮಾತ್ರ ಪರಿಗಣಿಸಲಾಗುವುದು. ಸೇವಾನುಭವ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ONLINE ನಲ್ಲಿ ಅಪಲೋಡ್ ಮಾಡುವುದು ಹಾಗೂ ಮೂಲ ದಾಖಲಾತಿಗಳ ಪರಿಶೀಲನೆ ವೇಳೆ ಮೂಲ ದಾಖಲಾತಿಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
- ಅಭ್ಯರ್ಥಿಗಳು Online ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಎಲ್ಲಾ ಪ್ರಮಾಣಪತ್ರಗಳ ಪ್ರತಿಯನ್ನು ಅಪಲೋಡ್ ಮಾಡತಕ್ಕದ್ದು, ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗುವಾಗ ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಸಲ್ಲಿಸಿದ ಎಲ್ಲಾ ಪ್ರಮಾಣಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.
- ನೇಮಕಾತಿಗಾಗಿ **ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ : 24.12.2025 ರ ಸಂಜೆ 05:30** ರವರೆಗೆ ನಿಗದಿಪಡಿಸಲಾಗಿದ್ದು, ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ದಿನಾಂಕದಂದು 45 ವರ್ಷ ವಯೋಮಿತಿಯನ್ನು ಮೀರಿರಬಾರದು.

**ಅಭ್ಯರ್ಥಿಯು ಆನ್‌ಲೈನ್ ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಾಖಲಾತಿಗಳು :**

1. ಎಸ್.ಎಸ್.ಎಲ್.ಸಿ ಅಂಕಪಟ್ಟಿ
2. ಸದರಿ ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ಸೆಮಿಸ್ಟರ್/ವರ್ಷಗಳ ಪದವಿ/ಸ್ನಾತಕೋತ್ತರ ಪದವಿ ಅಂಕಪಟ್ಟಿಗಳು. (ಇಂಟರ್ನ್‌ಶಿಪ್ ಅಂಕಗಳನ್ನು/ತಾತ್ಕಾಲಿಕ ಅಂಕಪಟ್ಟಿಗಳನ್ನು ಪರಿಗಣಿಸುವುದಿಲ್ಲ.
3. ನಿಗದಿತ ಪದವಿ/PG ಪ್ರಮಾಣ ಪತ್ರಗಳು
4. ಹೈದ್ರಾಬಾದ್- ಕರ್ನಾಟಕ (ಹೈ-ಕ) ಪ್ರಮಾಣ ಪತ್ರ
5. ಜಾತಿ ಪ್ರಮಾಣ ಪತ್ರ
6. ಸಂಬಂಧಪಟ್ಟ ನೋಂದಾಣಿ ಪ್ರಾಧಿಕಾರದಲ್ಲಿ ನೋಂದಾಣಿಯಾದ ಚಾಲ್ತಿಯಲ್ಲಿರುವ ಪ್ರಮಾಣಪತ್ರಗಳು
7. ಸೇವಾನುಭವ ಪ್ರಮಾಣಪತ್ರಗಳು
8. ಆಧಾರ್ ಕಾರ್ಡ್

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ನಿಗದಿಪಡಿಸುವ ಸ್ಥಳದಲ್ಲಿ ದಾಖಲಾತಿಗಳ ಪರಿಶೀಲನೆಗೆ ಅಭ್ಯರ್ಥಿಗಳು ಅವರ ಸ್ವಂತ ಖರ್ಚಿನಲ್ಲಿ ಹಾಜರಾಗುವುದು, ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಜೊತೆಗೆ ಅಪಲೋಡ್ ಮಾಡಿದ ಮೂಲ ದಾಖಲಾತಿಗಳನ್ನು ಮಾತ್ರ ಪರಿಶೀಲನೆ ಮಾಡಲಾಗುವುದು. ಮೂಲ ದಾಖಲಾತಿಗಳನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಮೂಲ ದಾಖಲಾತಿಗಳನ್ನು ಪರಿಶೀಲನೆ ಮಾಡುವ ದಿನಾಂಕವನ್ನು ಪತ್ರಿಕೆಗಳಲ್ಲಿ/www.vijayanagara.nic.in ತಿಳಿಸಲಾಗುವುದು. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ನೇಮಕಾತಿ ಪ್ರಾಧಿಕಾರದ ನಿರ್ಣಯವೇ ಅಂತಿಮವಾಗಿರುತ್ತದೆ.

- **ಭಾವಚಿತ್ರ ಮತ್ತು ಮಾದರಿ ಸಹಿ:** 100kb ಗಿಂತ ಕಡಿಮೆ ಗಾತ್ರ ಇರುವ ಪಾಸ್‌ಪೋರ್ಟ್ ಭಾವ ಚಿತ್ರವನ್ನು ಅಪ್ ಲೋಡ್ ಮಾಡತಕ್ಕದ್ದು ಮತ್ತು 50kb ಗಿಂತ ಕಡಿಮೆ ಗಾತ್ರವಿರುವ ಮಾದರಿ ಸಹಿಯ ಚಿತ್ರವನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.

ಸದಸ್ಯ ಕಾರ್ಯದರ್ಶಿಗಳು/ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳು
ವಿಜಯನಗರ ಜಿಲ್ಲೆ.